## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 528 |
| ಮಾನ್ಯ ಸದಸ್ಯರ ಹೆಸರು | : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 09-03-2020 |
| ಉತ್ತರಿಸುವ ಸಚಿವರು | : ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ) |

| | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರಿ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಮಂದಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗಿದೆ. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 288, ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 990 ಹಾಗೂ ಕಿರಿಯ ತಾಂತ್ರಿಕ ಶಾಲೆಗಳಲ್ಲಿ 42 ಒಟ್ಟಾರೆ 1320 ಅರೆಕಾಲಿಕ ಅತಿಥಿ ಉಪನ್ಯಾಸಕರುಗಳನ್ನು ಪ್ರಸಕ್ತ ಸಾಲಿನಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಎದುರಾಗಿ ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ. |
| ಆ | ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳುವಲ್ಲಿನ ಮಾನದಂಡಗಳೇನು; (ವಿವರ ನೀಡುವುದು) | ಪ್ರಸ್ತುತ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿಯಿರುವ ಪೂರ್ಣಕಾಲಿಕ ಉಪನ್ಯಾಸಕ/ ಸಹಾಯಕ ಪ್ರಾಧ್ಯಾಪಕ ಹುದ್ದೆಗೆದುರಾಗಿ ಅರೆಕಾಲಿಕ ಉಪನ್ಯಾಸಕರ ನೇಮಕಾತಿಯನ್ನು ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ ಉಪನ್ಯಾಸಕರು/ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನಿಗದಿಪಡಿಸಲಾಗಿರುವ ವಿದ್ಯಾರ್ಹತೆಗನುಗುಣವಾಗಿ ಪ್ರಾಂಶುಪಾಲರ ಹಂತದಲ್ಲಿ ನೇಮಕಾತಿ ಮಾಡಿಕೊಂಡು, ನಂತರ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಪರಿಶೀಲಿಸಿ ಅನುಮೋದನೆ ನೀಡಲಾಗುತ್ತಿದೆ. |
| ಇ | ಸದರಿಯವರಿಗೆ ತಲಾ ನೀಡಲಾಗುತ್ತಿರುವ ಗೌರವಧನದ ಮೊತ್ತವೆಷ್ಟು; ಯಾವ ಸಾಲಿನಿಂದ ನೀಡಲಾಗುತ್ತಿದೆ; | ಸರ್ಕಾರದ ಆದೇಶ ಸಂಖ್ಯೆ: ಇಡಿ 16 ಟಿಪಿಇ 2017, ದಿನಾಂಕ: 11.12.2019 ರಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳು/ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಅರೆಕಾಲಿಕ ಉಪನ್ಯಾಸಕರ ಮಾಸಿಕ ವೇತನವನ್ನು ರೂ. 12,500/- ಗಳಿಗೆ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರತಿ ಅರೆಕಾಲಿಕ ಉಪನ್ಯಾಸಕರ ಪ್ರತಿ ತಿಂಗಳ ಮಾಸಿಕ ವೇತನವನ್ನು 15,000/- ರೂ ಗಳಿಗೆ ಹೆಚ್ಚಿಸಲಾಗಿರುತ್ತದೆ. |
| ಈ | ಸದರಿಯವರಿಗೆ ಕಳೆದ 18 ತಿಂಗಳಿನಿಂದ ಗೌರವಧನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |

...2

| | | |
|---|---|---|
| ಉ | ಸದರಿ ಗೌರವಧನ ಪಾವತಿಸುವಲ್ಲಿನ ವಿಳಂಬಕ್ಕೆ ಕಾರಣಗಳೇನು; | 2019-20 ನೇ ಸಾಲಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ನಿರ್ವಹಣೆಗಾಗಿ ಲೆಕ್ಕ ಶೀರ್ಷಿಕೆ 2203-00-112-0-02-051 ರಡಿ ಅರೆಕಾಲಿಕ ಉಪನ್ಯಾಸಕರ ಭತ್ಯೆ ಪಾವತಿಸಲು ಒಟ್ಟು ಅಗತ್ಯವಿದ್ದ ರೂ 544.00 ಲಕ್ಷಗಳ ಎದುರಾಗಿ ಕೇವಲ ರೂ 9.00 ಲಕ್ಷಗಳನ್ನು ಮಾತ್ರ ಒದಗಿಸಲಾಗಿದೆ. ಇದೇ ರೀತಿ ಸರ್ಕಾರಿ ಪಾಲಿಟೆಕ್ನಿಕ್ ಲೆಕ್ಕ ಶೀರ್ಷಿಕೆ 2203-00-105-0-01-051 ರಡಿ ಅರೆಕಾಲಿಕ ಉಪನ್ಯಾಕರಿಗೆ ಒಟ್ಟು 977.92 ಲಕ್ಷಗಳ ಎದುರಾಗಿ ಕೇವಲ ರೂ 359.00 ಲಕ್ಷಗಳನ್ನು ಮಾತ್ರ ಒದಗಿಸಲಾಗಿದೆ. ಅನುದಾನದ ಕೊರತೆಯಿಂದಾಗಿ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರಿಗೆ ಬಾಕಿಯಿರುವ ಭತ್ಯೆ ಪಾವತಿಸುವುದು ಸಾಧ್ಯವಾಗಿರುವುದಿಲ್ಲ, |
| ಊ | ಯಾವ ಕಾಲಮಿತಿಯಲ್ಲಿ ಬಾಕಿ ಇರುವ ಗೌರವಧನವನ್ನು ಪಾವತಿಸಲಾಗುವುದು? | ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳ ಅರೆಕಾಲಿಕ ಉಪನ್ಯಾಸಕರ ವೇತನ ಭತ್ಯೆಯನ್ನು ಪಾವತಿಸಲು ಹೆಚ್ಚುವರಿ ಅನುದಾನವನ್ನು ಒದಗಿಸಲು ಆರ್ಥಿಕ ಇಲಾಖೆಯೊಂದಿಗೆ ವ್ಯವಹರಿಸಲಾಗುತ್ತಿದೆ. |

**ಇಡಿ 31 ಟಿಪಿಇ 2020**

**(ಡಾ: ಅಶ್ವಥ್ ನಾರಾಯಣ ಸಿ.ಎನ್)**
**ಉಪ ಮುಖ್ಯಮಂತ್ರಿಗಳು**
(ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ,
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ,
ಕೌಶಲಾಭಿವೃದ್ಧಿ, ಉದ್ಯಮಶೀಲತೆ ಹಾಗೂ
ಜೀವನೋಪಾಯ ಇಲಾಖೆ)